DECEMBER 27,2024
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಎರಡು ಬಾರಿ ದೇಶದ ಪ್ರಧಾನಮಂತ್ರಿಯಾಗಿ ಸೇವೆ ಸಲ್ಲಿಸಿದ್ದ, ಮಾಜಿ ಪ್ರಧಾನಿ ಡಾಕ್ಟರ್ ಮನ ಮೋಹನ್ ಸಿಂಗ್ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಂತಾಪ ಸೂಚಿಸಿದ್ದು, ಕಂಬನಿ ಮಿಡಿದಿದ್ದಾರೆ. ನವದೆಹಲಿಯಲ್ಲಿ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ಪ್ರಧಾನಿ ಮಂತ್ರಿ ನರೇಂದ್ರ ಮೋದಿಯವರು ಗೌರವ ಸಮರ್ಪಿಸಿದರು. ತಮ್ಮ ಎಕ್ಸ್ ಖಾತೆಯಲ್ಲಿ ಸಂತಾಪ ಸೂಚಿಸಿರುವ ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ್ ಜೋಶಿ ಅವರು ಮಾಜಿ ಪ್ರಧಾನಿ, ಅರ್ಥಶಾಸ್ತ್ರಜ್ಞರು, ಹಣಕಾಸು ಸಚಿವರಾಗಿದ್ದ ಮನಮೋಹನ್ ಸಿಂಗ್ ಅವರ ನಿಧನದಿಂದ ದೇಶಕ್ಕೆ ತುಂಬಲಾರದ ನಷ್ಟವಾಗಿದೆ ಎಂದಿದ್ದಾರೆ. ದೂರದೃಷ್ಟಿ, ಸಂಯಮ, ಆರ್ಥಿಕ ಮೇದಸ್ಸಿನಿಂದ, ರಾಷ್ಟ್ರವನ್ನು ದುರಿತ ಕಾಲದಲ್ಲಿ ಸಶಕ್ತವಾಗಿ ಮುನ್ನಡೆಸಿದ್ದ ಮನಮೋಹನ್ ಸಿಂಗ್ ಅವರು ದೇಶಕ್ಕೆ ನೀಡಿರುವ ಕೊಡುಗೆ ಅಪಾರ. ಆರ್ಥಿಕ ಸುಧಾರಣೆಗಳ ಮೂಲಕ ಭಾರತಕ್ಕೆ ಜಾಗತಿಕ ಮನ್ನಣೆ ತಂದುಕೊಟ್ಟವರು ಡಾಕ್ಟರ್ ಮನಮೋಹನ್ ಸಿಂಗ್ ಅವರು ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಖಾತೆ ಸಚಿವ ಹೆಚ್.ಡಿ ಕುಮಾರಸ್ವಾಮಿ ಸಂತಾಪ ಸೂಚಿಸಿದ್ದಾರೆ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ನಿಧನಕ್ಕೆ ರಾಜ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಬೆಂಗಳುರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಚ್ ಮುನಿಯಪ್ಪ ಸಂತಾಪ ಸೂಚಿಸಿದ್ದಾರೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿಯವರ ವೈಯಕ್ತಿಕ ಸಮಗ್ರತೆ, ಸ್ಪಷ್ಟತೆ, ಭಯವರಿಯದ ನಾಯಕತ್ವ ದೇಶವನ್ನು ಸಮರ್ಥವಾಗಿ ಮುನ್ನಡೆಸುತ್ತಿದೆ. ಓರ್ವ ನಾಯಕ ಹೇಗೆ ಪ್ರಭಾವಿಸಬಹುದು ಎಂಬುದುಕ್ಕೆ ಅವರು ಸಾಕ್ಷಿಯಾಗಿದ್ದಾರೆ ಎಂದು ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

ಧಾರವಾಡದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ, ನಿಸರ್ಗ ಸಂಶೋಧನಾ ಕೇಂದ್ರ ಆಯೋಜಿಸಿದ, ಅಭಿವೃದ್ಧಿಪರ ಚಿಂತಕ ಡಾಕ್ಟರ್ ಆರ್. ಬಾಲಸುಬ್ರಹ್ಮಣ್ಯಂ ರಚಿಸಿರುವ ಪವರ್ ವಿಥಿನ್–ದ ಲೀಡರ ಶಿಪ್ ಲೆಗಸಿ ಆಫ್ ನರೇಂದ್ರ ಮೋದಿ ಕೃತಿ ಅನಾವರಣ ಹಾಗೂ ಲೇಖಕರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ, ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

<><><>

ಪ್ರಲ್ಹಾದ್ ಜೋಶಿ 37 ಸೆಕೆಂದುಗಳು

<><><>

ಕೇಂದ್ರ ಸರ್ಕಾರದ ವತಿಯಿಂದ ಜನಸಾಮಾನ್ಯರಿಗೆ ಅನುಕೂಲವಾಗುವ ಹಲವು ಯೋಜನೆಗಳಿದ್ದು, ದಿಶಾ ಸಭೆಯಲ್ಲಿ ಆ ಯೋಜನೆಗಳ ಪ್ರಗತಿ ಬಗ್ಗೆ ಮಾಹಿತಿ ಪಡೆದು ಫಲಾನುಭವಿಗಳ ಬದುಕಿಗೆ ಆರ್ಥಿಕ ನೆರವು ಕೊಡುವುದು, ನಮ್ಮ ಕೇಂದ್ರ ಸರ್ಕಾರದ ಕರ್ತವ್ಯವಾಗಿದೆ ಎಂದು ಕೇಂದ್ರದ ಉಕ್ಕು ಮತ್ತು ಭಾರೀ ಕೈಗಾರಿಕಾ ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಮಂಡ್ಯ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು; ಶಿಕ್ಷಣ, ಕೃಷಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಹಲವು ಯೋಜನೆಗಳ ಜೊತೆಗೆ ಬೀದಿ ಬದಿ ವ್ಯಾಪಾರಿಗಳು, ಕೂಲಿ ಕಾರ್ಮಿಕರಿಗೆ ಆರ್ಥಿಕ ನೆರವು ನೀಡಲು 540 ಯೋಜನೆಗಳಿದ್ದು, ಅದರ ಸದುಪಯೋಗವನ್ನು ಫಲಾನುಭವಿಗಳು ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

<><><>

ಪರಿಸರದೊಂದಿಗಿನ ಒಡನಾಟ ಹಾಗೂ ನಿಸರ್ಗದ ಜೊತೆಗಿನ ಸಾಮೀಪ್ಯ ಹೆಚ್ಚಿನ ಜ್ಞಾನ ಹಾಗೂ ಅನಂದವನ್ನು ನೀಡುತ್ತದೆ, ಪರಿಸರ ಸಂರಕ್ಷಣೆಯಲ್ಲಿ ಎಲ್ಲರೂ ಕಟಿಬದ್ಧರಾಗಬೇಕು ಎಂದು ನಟ, ನಿರ್ದೇಶಕ, ಪರಿಸರ ತಜ್ಞ ಸುರೇಶ ಹೆಬ್ಳಿಕರ್ ಹೇಳಿದರು. ಆಕಾಶವಾಣಿ ಧಾರವಾಡದ ಅಮೃತ ಮಹೋತ್ಸವದ ಅಂಗವಾಗಿ 'ನಿಸರ್ಗ ಜ್ಞಾನಾಮೃತ' ಸರಣಿಯ ಉದ್ಘಾಟನೆಯನ್ನು, ನಿಲಯದ ಶಾಲ್ಮಲಾ ಸಭಾಂಗಣದಲ್ಲಿ ನೆರವೇರಿಸಿ ಅವರು ಮಾತನಾಡಿದರು. 'ನಿಸರ್ಗ ಜ್ಞಾನಾಮೃತ'ದ ರೂವಾರಿ ಮನಗುಂಡಿಯ ಶ್ರೀ ಬಸವಾನಂದ ಸ್ವಾಮಿಗಳು, ನಿಲಯದ ಕಾರ್ಯಕ್ರಮ ವಿಭಾಗದ ನಿರ್ದೇಶಕ ಶರಣ ಬಸವ ಚೋಳಿನ ಹಾಗೂ ಆಕಾಶವಾಣಿ ಧಾರವಾಡದ ಮುಖ್ಯಸ್ಥ ಕೆ.ಅರುಣ ಪ್ರಭಾಕರ್ ಇದ್ದರು. ನಿಸರ್ಗ ಜ್ಞಾನಾಮೃತ ಕಾರ್ಯಕ್ರಮವು ಜನೆವರಿ ತಿಂಗಳಿಂದ ಪ್ರತಿ ಗುರುವಾರ ಬೆಳಗ್ಗೆ 6.35 ಕ್ಕೆ ಕಲಬುರುಗಿ ಹಾಗೂ ಧಾರವಾಡ ಆಕಾಶವಾಣಿ ಕೇಂದ್ರಗಳಿಂದ ಏಕಕಾಲಕ್ಕೆ ಪ್ರಸಾರವಾಗಲಿದೆ.

<><><>

ಮಹಿಳೆಯರು ಸಬಲರಾಗಿ, ಸ್ವಾವಲಂಬಿ ಹಾಗೂ ಸಶಕ್ತ ಜೀವನ ನಡೆಸಲು ಸ್ವ ಉದ್ಯೋಗಿಗಳಾಗಬೇಕು ಎಂದು ಧಾರವಾಡ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸ್ವರೂಪಾ ಟಿ.ಕೆ ಹೇಳಿದರು. ಧಾರವಾಡ ತಾಲೂಕಿನ ಮುಮ್ಮಿಗಟ್ಟಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ, ರಾಜ್ಯ ಜೀವನೋಪಾಯ ಅಭಿಯಾನ ಹಾಗೂ ಜಿಲ್ಲಾ ಪಂಚಾಯಿತಿ ವತಿಯಿಂದ ಆಯೋಜಿಸಿದ್ದ ಜಲ್ ಜೀವನ್ ಮಿಷನ್ , ನಲ್ ಜಲ್ ಮಿತ್ರ ಕೌಶಲ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸ್ವ ಸಹಾಯ ಸಂಘಗಳ ಮಹಿಳಾ ಫಲಾನುಭವಿಗಳು ನೀರು ವಿತರಣಾ ನಿರ್ವಹಣೆ ಕುರಿತ ತರಬೇತಿ ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>